ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ಬಳ್ಳಾರಿ. ದೂ : 08392-275198, ಫ್ಯಾಕ್ಸ್ : 08392-275198

22ನೇ ಸೆಪ್ಟೆಂಬರ್ 2017

# ಹೆಣ್ಮಕ್ಕಳ ಶಿಕ್ಷಣಕ್ಕೆ ಸರಕಾರದಿಂದ ಉತ್ತೇಜನ ಚಿಂತನೆ: ಸಿಎಂ



ಬಳ್ಳಾರಿ,ಸೆ.22 : ರಾಜ್ಯ ಸರಕಾರ ಗುಣಮಟ್ಟದ ಶಿಕ್ಷಣ ನೀಡಲು ಮತ್ತು ಶಿಕ್ಷಣದ ಅಭಿವೃದ್ಧಿಗೆ ನಾನಾ ಕ್ರಮಗಳನ್ನು ಕೈಗೊಳ್ಳುತ್ತಿದೆ.ಹೆಣ್ಮಕ್ಕಳ ಶಿಕ್ಷಣಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ವಿನೂತನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸರಕಾರ ಚಿಂತನೆ ನಡೆಸಿದ್ದು, ಇನ್ನೂ ಕೆಲ ದಿನಗಳಲ್ಲಿ ಅದನ್ನು ಅನುಷ್ಠಾನಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ನಗರದ ಕಿತ್ತೂರು ರಾಣಿ ಚೆನ್ನಮ್ಮ ಶಾಲಾ ಮೈದಾನದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ವೀರಶೈವ ವಿದ್ಯಾವರ್ಧಕ ಸಂಘದ ಶತಮಾನೋತ್ಸವ ಕಾರ್ಯಕ್ರಮಕ್ಕೆ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಶ್ರೀಮಂತರ ಮಕ್ಕಳು ಲ್ಯಾಪ್‌ಟಾಪ್ ಖರೀದಿಸುತ್ತಾರೆ; ಬಡವರ ಮಕ್ಕಳಿಗೆ ಆಗುವುದಿಲ್ಲ. ಈ ಹಿನ್ನೆಲೆಯಲ್ಲಿ ಪದವಿ ಪ್ರಥಮ ವರ್ಷಕ್ಕೆ ಸೇರ್ಪಡೆಯಾದ ಎಲ್ಲ ವರ್ಗದ 1.9೦ಲಕ್ಷ ವಿದ್ಯಾರ್ಥಿಗಳಿಗೆ ಈ ವರ್ಷ ಗುಣಮಟ್ಟದ ಲ್ಯಾಪ್‌ಟಾಪ್ ವಿತರಿಸಲು ಸರಕಾರ ನಿರ್ಧರಿಸಿದ್ದು,ನವೆಂಬರ್‌ನಲ್ಲಿ ಚಾಲನೆ ನೀಡಲಾಗುತ್ತಿದೆ ಎಂದು ವಿವರಿಸಿದ ಸಿಎಂ ಸಿದ್ಧರಾಮಯ್ಯ ಅವರು 1.5 ಕೋಟಿ ಮಕ್ಕಳಿಗೆ ವಾರದಲ್ಲಿ ಐದು ದಿನ ಕೆನೆಭರಿತ ಬಿಸಿಹಾಲು ಕೊಡಲಾಗುತ್ತಿದೆ. 8ನೇ ತರಗತಿ ಮಕ್ಕಳಿಗೆ ಸೈಕಲ್ ವಿತರಣೆ, ಮಕ್ಕಳಿಗೆ ಸಮವಸ್ತ್ರ,ಪಠ್ಯಪುಸ್ತಕ ಹಾಗೂ ಶೂ ಮತ್ತು ಸಾಕ್ಸ್‌ಗಳನ್ನು ವಿತರಿಸಲಾಗುತ್ತಿದೆ. ಒಟ್ಟಿನಲ್ಲಿ ನಮ್ಮ ಸರಕಾರ ಶಿಕ್ಷಣದ ಅಭಿವೃದ್ಧಿಗೆ ನಾನಾ ಕ್ರಮಗಳನ್ನು ಕೈಗೊಂಡಿದೆ ಎಂದು ಅವರು ವಿವರಿಸಿದರು.

ತಾವು ವಿದ್ಯಾರ್ಥಿ ದಿಸೆಯಲ್ಲಿ ಅನುಭವಿಸಿದ ಅನುಭವಗಳಿಂದ ಹುಟ್ಟಿದ ಯೋಜನೆಗಳಾದ ವಿದ್ಯಾಸಿರಿ ಮತ್ತು ಶೂ ಭಾಗ್ಯದ ಕಥೆಯನ್ನು ಸಭೆಯಲ್ಲಿ ಹೇಳಿದ ಮುಖ್ಯಮಂತ್ರಿಗಳು, ನಾನು ಹೈಸ್ಕೂಲ್ ಬಂದ್ಮೇಲೆಯೇ ಚಪ್ಪಲಿ ಹಾಕಿಕೊಂಡಿದ್ದು, ಅದು ಟೈರ್‌ನಿಂದ ಮಾಡಿದ್ದಾಗಿದ್ದರಿಂದ 3 ವರ್ಷ ಬಂತು ಎಂದರು. ರೂಂ ಮಾಡಿ ಅನ್ನ ಮಾಡಿ ಹೊರಗಡೆಯ ಹೋಟೆಲ್‌ನಿಂದ ಸಾಂಬಾರು ತರಿಸಿಕೊಂಡು ತಿಂದು ವಿದ್ಯಾಭ್ಯಾಸ ಮಾಡಿದ್ದೇ; ಆ ಕಷ್ಟಗಳು ನಮ್ಮ ಮಕ್ಕಳಿಗೆ ಬರಬಾರದು ಅಂತ ವಿದ್ಯಾಸಿರಿ ಜಾರಿಗೆ ತಂದಿದ್ದೇನೆ; ಅದರ ಪ್ರಯೋಜನವನ್ನು 1ಲಕ್ಷ ವಿದ್ಯಾರ್ಥಿಗಳು ಪಡೆದುಕೊಳ್ಳುತ್ತಿದ್ದಾರೆ ಎಂದರು.

## ಗುಣಮಟ್ಟದ ಶಿಕ್ಷಣದಿಂದ ಮಾತ್ರ ಸಮ-ಸಮಾಜ ನಿರ್ಮಾಣ ಸಾಧ್ಯ:

ಸಮಾಜದ ಕಟ್ಟಕಡೆಯ ವ್ಯಕ್ತಿಯ ಮಗ ಕೂಡ ಗುಣಮಟ್ಟದ ಶಿಕ್ಷಣ ಪಡೆದಾಗ ಮಾತ್ರ ಸಮ-ಸಮಾಜ ನಿರ್ಮಾಣವಾಗಲು ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿಪ್ರಾಯಪಟ್ಟರು.

ಒಂದು ಸಮಾಜ, ದೇಶ ಅಭಿವೃದ್ಧಿಯಾಗಿದೆ ಎಂದರೇ ಅಲ್ಲಿನ ಜನರು ಅಕ್ಷರ ಸಂಸ್ಕೃತಿ ಉಳ್ಳವರಾಗಿದ್ದಾರೆಂದು ಅರ್ಥ ಎಂದು ಉಲ್ಲೇಖಿಸಿದ ಸಿಎಂ ಅವರು, ಶಿಕ್ಷಣದಿಂದ ಮಾತ್ರ ಅರಿವು, ಬದುಕು ಕಟ್ಟಿಕೊಳ್ಳಲು ಸಾಧ್ಯ ಮತ್ತು ಸಮಾಜದಲ್ಲಿ ಬದಲಾವಣೆ ತರಲು ಸಾಧ್ಯ. ಸಮಾಜದಲ್ಲಿ ಹುಟ್ಟಿದ ಎಲ್ಲರಿಗೂ ಶಿಕ್ಷಣ ಸಿಗಬೇಕು ಎಂದರು.

ಬಹುಸಂಖ್ಯಾತ ಜನರು ಅದರಲ್ಲೂ ವಿಶೇಷವಾಗಿ ಚಾತುವರ್ಣ ಪದ್ದತಿಯಲ್ಲಿ ಕೊನೆಯ ವರ್ಗ ಮತ್ತು ಎಲ್ಲ ವರ್ಗಗಳ ಮಹಿಳೆಯರು ಅಕ್ಷರ ಸಂಸ್ಕೃತಿಯಿಂದ ವಿಮುಖರಾಗಿರುವುದು ಸಾಮಾಜಿಕ,ಆರ್ಥಿಕ ಅಸಮಾನತೆ ಹಾಗೂ ಲಿಂಗ ತಾರತಮ್ಯ ಮತ್ತು ಜಾತಿಯತೆಗೆ ಕಾರಣ ಎಂದು ಸಿಎಂ ಹೇಳಿದರು.

ಸ್ವಾತಂತ್ರ್ಯ ಪೂರ್ವದಲ್ಲಿ ಬಳ್ಳಾರಿ ಮದ್ರಾಸ್ ಪ್ರಾಂತ್ಯಕ್ಕೆ ಸೇರಿತ್ತು; ಮಾತೃಭಾಷೆ ಕನ್ನಡವಾದರೇ ಆಡಳಿತ ಭಾಷೆ ತಮಿಳು, ಇಂತಹ ಹೊತ್ತಿನಲ್ಲಿ 1916ರಲ್ಲಿ ವೀರಶೈವ ವಿದ್ಯಾವರ್ಧಕ ಸಂಘ ಸ್ಥಾಪಿಸಿ 100 ವರ್ಷಗಳ ಕಾಲ ಶಿಕ್ಷಣ ನೀಡಿ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ ಈ ಸಂಸ್ಥೆಯ ಸಾಧನೆ ಅಮೋಘವಾದುದು ಎಂದು

ಬಣ್ಣಿಸಿದ ಮುಖ್ಯಮಂತ್ರಿಗಳು, ಈ ಸಂಸ್ಥೆ ಇನ್ನೂ ಎತ್ತರಕ್ಕೆ ಬೆಳೆಯಲಿ ಎಂದು ಆಶಿಸಿದರು.

ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಅಲ್ಲಂ ಬಸವರಾಜ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಸಚಿವರಾದ ಬಸವರಾಜ ರಾಯರೆಡ್ಡಿ, ಶರಣಪ್ರಕಾಶ ಪಾಟೀಲ್, ಸಂತೋಷ ಲಾಡ್, ಶಾಸಕರು, ವಿಧಾನಪರಿಷತ್ ಸದಸ್ಯರು, ನಿಗಮ ಮಂಡಳಿಗಳ ಅಧ್ಯಕ್ಷರು, ಸ್ಥಳೀಯ ಸಂಸ್ಥೆಗಳ ಪ್ರತಿನಿಧಿಗಳು, ಮಾಜಿ ಸಚಿವರು ಮತ್ತು ಮಾಜಿ ಶಾಸಕರು ಸೇರಿದಂತೆ ಅನೇಕರು ಇದ್ದರು.

-------------